## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 167

ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 12.09.2022

ಉತ್ತರಿಸುವವರು : ಸನ್ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿ ಪತ್ರಕರ್ತರ ಮೇಲೆ ಚಿರತೆ ದಾಳಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು.<br><br>ಶ್ರೀ ಸಂಜು ಕುಮಾರ ಬುಕ್ಕಾ "ಪ್ರಜಾ ಟಿವಿ" ವರದಿಗಾರರ ಮೇಲೆ ಚಿರತೆ ದಾಳಿ ಮಾಡಿರುವುದಾಗಿ ವರದಿಯಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ದಾಳಿ ಮಾಡಿದ ಚಿರತೆಯ ಹುಡುಕಾಟಕ್ಕಾಗಿ ಸರ್ಕಾರ ತೆಗೆದುಕೊಂಡ ಕ್ರಮವೇನು; | ದಾಳಿ ಮಾಡಿದ ಚಿರತೆಯ ಹುಡುಕಾಟಕ್ಕಾಗಿ ಸತತ 7 ದಿವಸಗಳ ಕಾಲ ಎಲ್ಲಾ ಅರಣ್ಯ ಸಿಬ್ಬಂದಿಗಳು ಸಕ್ರಿಯವಾಗಿ ಇದ್ದು, ಚಿರತೆ ಹುಡುಕಾಟ ಮಾಡಿ ಸೆರೆ ಹಿಡಿಯಲು ಪ್ರಯತ್ನಿಸಲಾಗಿರುತ್ತದೆ ಹಾಗೂ ಬೋನು ಅಳವಡಿಸಲಾಗಿದೆ. ಇದಲ್ಲದೇ 4 ಸ್ಥಳಗಳಲ್ಲಿ ಕ್ಯಾಮರಾ ಟ್ರ್ಯಾಪ್ ಅಳವಡಿಸಲಾಗಿದ್ದು ರಾತ್ರಿ ಸಮಯದಲ್ಲಿ ಲೈವ್ ಕ್ಯಾಮರಾ ಅಳವಡಿಸಲಾಗಿರುತ್ತದೆ. ಮುಂದುವರೆದು, ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ಸಮೀಪದ ಹಳ್ಳಿಗಳಲ್ಲಿ ಜನಜಾಗೃತಿ ಮೂಡಿಸಲು ಡಂಗೂರದ ಮೂಲಕ ಸಾರ್ವಜನಿಕರಿಗೆ ಸೂಚಿಸಲಾಗಿರುತ್ತದೆ. |
| ಇ) | ದಾಳಿಗೊಳಗಾದ ಪತ್ರಕರ್ತನಿಗೆ ಸರ್ಕಾರದಿಂದ ಪರಿಹಾರ ನೀಡಲಾಗಿದೆಯೇ; ನೀಡಿದ್ದಲ್ಲಿ, ಪರಿಹಾರ ಮೊತ್ತವೆಷ್ಟು? | ಚಿರತೆ ದಾಳಿ ಮಾಡಿರುವ ಫಲಾನುಭವಿಗೆ ವೈದ್ಯಕೀಯ ಚಿಕಿತ್ಸಾ ವೆಚ್ಚಕ್ಕಾಗಿ ನಿಯಮಾನುಸಾರ ರೂ.2,74,000/- ಗಳ ದಯಾತ್ಮಕ ಧನವನ್ನು ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಅಪಜೀ 122 ಎಫ್‌ಡಬ್ಲ್ಯೂಎಲ್ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿಗಳು